ಹಿಂದುಳಿದ ವರ್ಗಗಳ ಮೆಟ್ರಿಕ್ ಪೂರ್ವ ವಸತಿ ನಿಲಯ ಮಂಜೂರು

5065 (5377); ಶ್ರೀ ಅರವಿಂದ್ ಚಂದ್ರಕಾಂತ್ ಪಾಟೀಲ್ (ಖಾನಾಪುರ)

ಅ) ಬೆಳಗಾವಿ ಜಿಲ್ಲೆ ಖಾನಾಪುರ ತಾಲ್ಲೂಕಿನಲ್ಲಿರುವ ಹಿಂದುಳಿದ ವರ್ಗಗಳ ಬಾಲಕ/ಬಾಲಕಿಯರ ಮೆಟ್ರಿಕ್–ಪೂರ್ವ ವಸತಿನಿಲಯಗಳ ಸಂಖ್ಯೆ ಎಷ್ಟು;

ಆ) ಈ ವಸತಿನಿಲಯಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆಯೇ; (ಮಾಹಿತಿ ನೀಡುವುದು);

ಇ) ಬೆಳಗಾವಿ ಜಿಲ್ಲೆ ಖಾನಾಪುರ ತಾಲ್ಲೂಕಿನ ಜಾಂಬೋಟಿ ಮತ್ತು ಶಿರೋಲಿ ಗ್ರಾಮಗಳಲ್ಲಿ ಹಿಂದುಳಿದ ವರ್ಗಗಳ ಬಾಲಕ/ಬಾಲಕಿಯರ ಮೆಟ್ರಿಕ್–ಪೂರ್ವ ವಸತಿನಿಲಯಗಳು ಇಲ್ಲದೆ, ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿದ್ದು, ಹೊಸದಾಗಿ ವಸತಿನಿಲಯಗಳನ್ನು ಮಂಜೂರು ಮಾಡುವಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ, ಮಂಜೂರಾತಿ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಹೆಚ್. ಆಂಜನೇಯ (ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)

ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಬೆಳಗಾವಿ ಜಿಲ್ಲೆ ಖಾನಾಪುರ ತಾಲ್ಲೂಕಿನಲ್ಲಿ 4 ಮೆಟ್ರಿಕ್–ಪೂರ್ವ ಬಾಲಕರ ಹಾಗೂ 1 ಮೆಟ್ರಿಕ್–ಪೂರ್ವ ಬಾಲಕಿಯರ ಹೀಗೆ ಒಟ್ಟು 5 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿವೆ.

ಆ) ಖಾನಾಪುರ ತಾಲ್ಲೂಕಿನಲ್ಲಿರುವ ಎಲ್ಲಾ 5 ಮೆಟ್ರಿಕ್–ಪೂರ್ವ ವಿದ್ಯಾರ್ಥಿನಿಲಯಗಳಿಗೆ ಈ ಕೆಳಕಂಡ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದೆ.

- ಮಂಚ
- ಜಮಖಾನ–ಹೊದಿಕೆ
- ತಟ್ಟೆ–ಲೋಟ
- ಟ್ರಂಕ್
- ನೀರಿನ ಶುದ್ಧೀಕರಣ ಯಂತ್ರ
- ಇನ್ವರ್ಟರ್
- ಶೌಚಾಲಯ ಮತ್ತು ಸ್ನಾನಗೃಹಗಳು

ಇ) ಹೌದು.

ಈ) ಹೊಸ ವಿದ್ಯಾರ್ಥಿನಿಲಯಗಳ ಮಂಜೂರಾತಿಯು ಜಿಲ್ಲೆಯ ಒಟ್ಟಾರೆ ಬೇಡಿಕೆ ಹಾಗೂ ಅನುದಾನದ ಲಭ್ಯತೆಯನ್ನು ಅನುಸರಿಸಿ ಕ್ರಮವಹಿಸಲಾಗುವುದು.

ಹಿಂದುಳಿದ ವರ್ಗಗಳ ಫಲಾನುಭವಿಗಳಿಗೆ ಸೌಲಭ್ಯ

5066 (5378); ಶ್ರೀ ಅರವಿಂದ್ ಚಂದ್ರಕಾಂತ್ ಪಾಟೀಲ್ (ಖಾನಾಪುರ)

ಅ) ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ 2014–15 ಹಾಗೂ 2015–16ನೇ ಸಾಲಿಗೆ ನಿಗದಿಪಡಿಸಿದ ವಿವಿಧ ಯೋಜನೆಗಳ ಆರ್ಥಿಕ ಮತ್ತು ಭೌತಿಕ ಗುರಿ ಎಷ್ಟು; (ಯೋಜನೆ ಮತ್ತು ಯೋಜನೇತರವಾರು ಪ್ರತ್ಯೇಕವಾಗಿ ಮಾಹಿತಿ ನೀಡುವುದು);

ಆ) ಬೆಳಗಾವಿ ಜಿಲ್ಲೆ ಖಾನಾಪುರ ತಾಲ್ಲೂಕಿನಲ್ಲಿ ಸದರಿ ಸಾಲುಗಳಲ್ಲಿ ಯೋಜನೆ ಹಾಗೂ ಯೋಜನೇತರ ಅಡಿಯಲ್ಲಿ ಎಷ್ಟು